# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ ಈ ಕಾರ್ಖಾನೆಯು 2018-19ನೇ ಸಾಲಿನ ಹಂಗಾಮು ಪ್ರಾರಂಭಿಸಲು ದುಡಿಯುವ ಬಂಡವಾಳ ಸಾಲ ಮಂಜೂರು ಮಾಡುವ ಬಗ್ಗೆ.

**<u>ಓದಲಾಗಿದೆ:</u>**

1) ಸರ್ಕಾರದ ಆದೇಶ ಸಂಖ್ಯೆ: ವಾಕೈ 76 ಸಸಕಾ 2016, ದಿನಾಂಕ:11/12/2017
2) ಸರ್ಕಾರದ ಆದೇಶ ಸಂಖ್ಯೆ:ವಾಕೈ 91 ಸಸಕಾ 2018 ಬೆಂಗಳೂರು, ದಿನಾಂಕ:05/12/2018
3) ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 268 ವೆಚ್ಚ-2/2018, ದಿನಾಂಕ:10-01-2019.

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರಲ್ಲಿನ ಆದೇಶದಲ್ಲಿ ಸರ್ಕಾರವು 2017-18ನೇ ಸಾಲಿನಲ್ಲಿ ಸರ್ಕಾರದ ಖಾತ್ರಿಯೊಂದಿಗೆ ರೂ.10.00ಕೋಟಿಗಳ ದುಡಿಯುವ ಬಂಡವಾಳವನ್ನು ಶೇ.1ರ ಖಾತರಿ ಕಮೀಷನ್ ಅನ್ನು ಸರ್ಕಾರಕ್ಕೆ ಪಾವತಿಸುವ ಹಾಗೂ ಕೆ.ಟಿ.ಟಿ.ಪಿ ಆಕ್ಟ್ ಅನ್ನು ಅನುಸರಿಸುವ ಷರತ್ತಿಗೊಳಪಟ್ಟು ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರಲ್ಲಿನ ಆದೇಶದಲ್ಲಿ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ ಈ ಕಾರ್ಖಾನೆಯು 2018-19ನೇ ಸಾಲಿನ ಹಂಗಾಮು ಪ್ರಾರಂಭಿಸಲು ದುಡಿಯುವ ಬಂಡವಾಳ ಸಾಲ ರೂ.20.00ಕೋಟಿಗಳನ್ನು (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಮಂಜೂರು ಮಾಡಿ ಆದೇಶಿಸಲಾಗಿದೆ ಹಾಗೂ ಈ ನೆರವಿನೊಂದಿಗೆ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯ ಪುನರುತ್ಥಾನ (Rejuvenation) ಹಾಗೂ ನಿರ್ವಹಣೆಗೆ (Management) ಸರ್ಕಾರದಿಂದ ಆರ್ಥಿಕ ನೆರವನ್ನು ನೀಡುವುದು ಅಂತ್ಯಗೊಳ್ಳುತ್ತದೆ. ಇನ್ನು ಮುಂದೆ ಸದರಿ ಸಕ್ಕರೆ ಕಾರ್ಖಾನೆಯ ನಿರ್ವಹಣಾ ವೆಚ್ಚಗಳು(Management), ಸಾಲಗಳು(liabilities) ಇತ್ಯಾದಿಗಳ ಹೊರೆಯನ್ನು ಕಾರ್ಖಾನೆಯೇ ನಿರ್ವಹಿಸತಕ್ಕದ್ದು ಹಾಗೂ ಸರ್ಕಾರದಿಂದ ಇನ್ನಾವುದೇ ನೆರವನ್ನು ನೀಡಲಾಗುವುದಿಲ್ಲವೆಂದೂ ಸಹ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರಲ್ಲಿ 2018-19ನೇ ಸಾಲಿನ ಪರಿಷ್ಕೃತ ಅಂದಾಜು ಹಾಗೂ ಆಯವ್ಯಯ ಅಂದಾಜಿಗೆ ವ್ಯತ್ಯಾಸವಿರುವ ಮೊತ್ತವನ್ನು ಲೆಕ್ಕಶೀರ್ಷಿಕೆ 6860-04-101-0-12-394ರಲ್ಲಿ ಬಿಡುಗಡೆಗೊಳಿಸುವಂತೆ ತಿಳಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ ಈ ಕಾರ್ಖಾನೆಯ 2018-19ನೇಷ ಸಾಲಿನ ಹಂಗಾಮು ಪ್ರಾರಂಭಿಸಲು ದುಡಿಯುವ ಬಂಡವಾಳ

ಸಾಲ ಮಂಜೂರು ಮಾಡಿರುವ ರೂ.20.00ಕೋಟಿಗಳನ್ನು ಬಿಡುಗಡೆ ಮಾಡಲು ತೀರ್ಮಾನಿಸಲಾಗಿದೆ. ಅಂತೆ ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ವಾಕೈ 91 ಸಸಕಾ 2018 ಬೆಂಗಳೂರು, ದಿನಾಂಕ :16/01/2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ ಈ ಕಾರ್ಖಾನೆಯ 2018-19ನೇ ಸಾಲಿನ ಹಂಗಾಮು ಪ್ರಾರಂಭಿಸಲು ದುಡಿಯುವ ಬಂಡವಾಳ ಸಾಲವಾಗಿ ಮಂಜೂರು ಮಾಡಿರುವ ರೂ.20.00ಕೋಟಿಗಳನ್ನು (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಲೆಕ್ಕ ಶೀರ್ಷಿಕೆ 6860-04-101-0-12-394ರಡಿಯಲ್ಲಿ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ವಾಕೈ 66 ಸಸಕಾ 2018, ದಿನಾಂಕ:12/12/2018ರಲ್ಲಿ 2018-19ರ ಆಯವ್ಯಯದಲ್ಲಿ ಘೋಷಿಸಿರುವ "ಕಬ್ಬು ಉತ್ಪಾದನೆ ಮತ್ತು ಸಕ್ಕರೆ ಇಳುವರಿಯನ್ನು ಹೆಚ್ಚಿಸಲು ಹೊಸ ತಳಿಗಳ ಅಭಿವೃದ್ಧಿಗೆ ಆರ್ಥಿಕ ಸಹಾಯ" ಯೋಜನಗೆ ಆಯವ್ಯಯದ ಲೆಕ್ಕಶೀರ್ಷಿಕೆ 2851-08-201-0-01-051 (ಸಾಮಾನ್ಯ ವೆಚ್ಚಗಳು) ರಡಿಯಲ್ಲಿ ಒದಗಿಸಲಾಗಿರುವ ರೂ.5.00ಕೋಟಿಗಳ ಪೈಕಿ ಬೀದರ್ ಜಿಲ್ಲೆಗೆ ನಿಗದಿಪಡಿಸಿರುವ ರೂ.1.00ಕೋಟಿಯನ್ನು ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ ಈ ಕಾರ್ಖಾನೆಗೆ ಮುಂದೆ ಪೂರಕ ಅಂದಾಜಿನಲ್ಲಿ ಅನುಮೋದನೆ ಪಡೆದ ನಂತರ ಕಾರ್ಖಾನೆಗೆ ಬಿಡುಗಡೆಗೊಳಿಸಬಹುದಾದ ರೂ.20.00ಕೋಟಿಗಳ ಅನುದಾನದಲ್ಲಿ ಸದರಿ ಯೋಜನೆಗೆ ವರ್ಗಾಯಿಸುವ ಷರತ್ತಿಗೊಳಪಡಿಸಿ ಬಿಡುಗಡೆಗೊಳಿಸಲಾಗಿರುತ್ತದೆ. ಅದರಂತೆ ಪ್ರಸ್ತುತ ಕಾರ್ಖಾನೆಗೆ ಬಿಡುಗಡೆ ಮಾಡಿರುವ ರೂ.20.00ಕೋಟಿಗಳ ಪೈಕಿ ರೂ.1.00ಕೋಟಿಯನ್ನು 2018-19ರ ಆಯವ್ಯಯದಲ್ಲಿ ಘೋಷಿಸಿರುವ "ಕಬ್ಬು ಉತ್ಪಾದನೆ ಮತ್ತು ಸಕ್ಕರೆ ಇಳುವರಿಯನ್ನು ಹೆಚ್ಚಿಸಲು ಹೊಸ ತಳಿಗಳ ಅಭಿವೃದ್ಧಿಗೆ ಆರ್ಥಿಕ ಸಹಾಯ" ಯೋಜನೆಗೆ ಆಯವ್ಯಯದ ಲೆಕ್ಕಶೀರ್ಷಿಕೆ 2851-08-201-0-01-051 (ಸಾಮಾನ್ಯ ವೆಚ್ಚಗಳು)ಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಕಾಲಕಾಲಕ್ಕೆ ಮಾರಾಟ ಮಾಡುವ ಸಕ್ಕರೆ ಗರಿಷ್ಠ ಬೆಲೆ ದೊರಕುವಂತೆ ಕಡ್ಡಾಯವಾಗಿ ಕಾರ್ಖಾನೆಯು ನೋಡಿಕೊಳ್ಳತಕ್ಕದ್ದು, ಈ ಸಂಬಂಧ ವರದಿಯನ್ನು ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರಿಗೆ ಸಲ್ಲಿಸುವುದು ಹಾಗೂ ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಸೂಕ್ತ ಮೇಲ್ವಿಚಾರಣೆ ಮಾಡುವುದು.

ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಇವರಿಗೆ ಹಣ ಸಂದಾಯ ಸ್ವೀಕೃತಿಯ ಮೇಲೆ ಮೇಲು ಸಹಿ ಮಾಡಲು ಪ್ರಾಧಿಕರಿಸಲಾಗಿದೆ. ಕಬ್ಬು ಅಭಿವೃದ್ಧಿ ಆಯುಕ್ತರು ಮತ್ತು ಸಕ್ಕರೆ ನಿರ್ದೇಶಕರ ಕಛೇರಿಯ ಕೇಂದ್ರ ಸ್ಥಾನಿಕ ಸಹಾಯಕರು ಹಣ ಸಂದಾಯ ಸ್ವೀಕೃತಿಯ ಮೇಲೆ ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಇವರ ಮೇಲು ರುಜುವಿನೊಂದಿಗೆ ಈ ಹಣವನ್ನು ಖಜಾನೆಯಿಂದ ಪಡೆದು ಪಾಂಡವಪುರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಪಾಂಡವಪುರ, ಮಂಡ್ಯ ಜಿಲ್ಲೆ ಈ ಕಾರ್ಖಾನೆಗೆ ನೀಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಎಫ್‌ಡಿ 268 ವೆಚ್ಚ-2/2018, ದಿನಾಂಕ:10/01/2019ರಲ್ಲಿನ ಸಹಮತಿಯ ಮೇರೆಗೆ ಹಾಗೂ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/01/19

(ಜೆ.ಶೀಲಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ
ದೂರವಾಣಿ ಸಂಖ್ಯೆ: 080-22034611

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ – ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಹಾಗೂ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿಗಳು:

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ & ಆರ್), ವಿಧಾನ ಸೌಧ, ಬೆಂಗಳೂರು.
5) ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು.
6) ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್.
7) ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಹಳ್ಳಿಖೇಡ್, ಬೀದರ್ ಜಿಲ್ಲೆ
8) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ಸಹಕಾರ ಸಂಘಗಳ ನಿಬಂಧಕರು, ನಂ.1 ಅಲಿ ಆಸ್ಕರ್ ರಸ್ತೆ, ಬೆಂಗಳೂರು-52.
10) ಸರ್ಕಾರದ ಉಪ ಕಾರ್ಯದರ್ಶಿ, (ಬಿ & ಆರ್), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
11) ಮಾನ್ಯ ಮುಖ್ಯ ಮಂತ್ರಿಗಳ ಅಪರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
12) ಮಾನ್ಯ ಸಕ್ಕರೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
13) ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
14) ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
15) ಸರ್ಕಾರದ ಉಪ ಕಾರ್ಯದರ್ಶಿ(ಸಕ್ಕರೆ), ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಆಪ್ತ ಸಹಾಯಕರು.
16) ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17) ಸಚಿವ ಸಂಪುಟ ಶಾಖೆ (ವಿಷಯ ಸಂಖ್ಯೆ:ಸಿ 713/2018), ವಿಧಾನಸೌಧ, ಬೆಂಗಳೂರು.
18) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-2 ಮತ್ತು 10, ವಿಧಾನಸೌಧ, ಬೆಂಗಳೂರು.
19) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.